ಶ್ರೀ ಕೆ.ಎಸ್. ಈಶ್ವರಪ್ಪ ; Project Report ಇಡುತ್ತೇವೆ. ಚರ್ಚೆ ಮಾಡುತ್ತೇವೆಂದು ಹೇಳಿದೆವಲ್ಲ. ಇನ್ನು ನಾನು ಈಗ ಯಾವ ರೀತಿಯಲ್ಲಿ ಉತ್ತರ ಕೊಡಲಿ?

ಅಧ್ಯಕ್ಷರು : ಆಯಿತು. ಕುಳಿತುಕೊಳ್ಳಿ.

ಶ್ರೀ ಟಿ.ಬಿ. ಜಯಚಂದ್ರ : ಮಂತ್ರಿಗಳೇ ಹೀಗೆ ಹೇಳಿಬಿಟ್ಟರೆ. detailed project report ಬೇಕಾಗಿಲ್ಲ. ಅಗ್ರಿಮೆಂಟ್ ಮಾಡಿಕೊಳ್ಳುತ್ತೇವೆಂದರೆ. ಏನಿದು?

ಶ್ರೀ ಕೆ.ಎಸ್. ಈಶ್ವರಪ್ಪ ; ಹೊರಗಡೆ ಸ್ಟೇಟ್‌ಮೆಂಟ್ ಮಾಡಿದರೆ ಆಯಿತೇ. ನಾವು ಅದರ ಬಗ್ಗೆ ತೀರ್ಮಾನವನ್ನು ತೆಗೆದುಕೊಂಡಿಲ್ಲ.

ಶ್ರೀ ಬಿ.ಎಸ್. ಯಡಿಯೂರಪ್ಪ : ದಯಮಾಡಿ ಈ ಮನೆಯ ಯಾವುದೇ ಹಿರಿಯ ಸದಸ್ಯರು ತಪ್ಪು ಗ್ರಹಿಕೆ ಮಾಡಿಕೊಳ್ಳುವ ಅಗತ್ಯವಿಲ್ಲ. ಈ ಮನೆಯಲ್ಲಿ ಚರ್ಚೆಯಾಗಬೇಕು. ನಿಮ್ಮೆಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡೇ ನಾವು ಮುಂದೆ ಹೋಗಬೇಕಾಗಿದೆ. ಆ ಹಿನ್ನೆಲೆಯಲ್ಲಿ ಪ್ರತಿ ಪಕ್ಷದ ಎಲ್ಲಾ ನಾಯಕರುಗಳ ಒಂದು ಸಭೆ ಕರೆದಿದ್ದೆ. ಅವತ್ತು ಚರ್ಚೆಯಾಗಲಿಲ್ಲ. ಅವರು ಇಲ್ಲಿಯೇ ಜಿಂದಾಲ್‌ನಲ್ಲಿ ಇದ್ದುದರಿಂದ ನಮಗೆ ತುರ್ತಾಗಿ 200. 300 ಮೆಗಾವ್ಯಾಟ್‌ಗಳಷ್ಟು ವಿದ್ಯುತ್ ಬೇಕಾಗಿದ್ದುದರಿಂದ ನಾವು ರಿಕ್ವೆಸ್ಟ್ ಮಾಡಿಕೊಂಡು ಆ ದಿಕ್ಕಿನಲ್ಲಿ ನಮ್ಮ ಅಧಿಕಾರಿಗಳು ಪ್ರಯತ್ನಿಸಿ ಅಲ್ಲಿಗೆ ಹೋಗಿ ಬಂದಿದ್ದಾರೆ. ಈ ಸಂದರ್ಭದಲ್ಲಿ ಬಹಳ ದೊಡ್ಡ ಪ್ರಮಾಣದಲ್ಲಿ ಅಲ್ಲಿ ಕಲ್ಲಿದ್ದಲು ಸಿಗುತ್ತಿರುವುದರಿಂದ ಅಲ್ಲಿನ ಸರ್ಕಾರದ 1.500 ಎಕರೆಯಷ್ಟು ಭೂಮಿಯಲ್ಲಿ 1.000 ಮೆಗಾವ್ಯಾಟ್‌ಗಳಷ್ಟು ವಿದ್ಯುತ್ ಮಾಡುವುದಕ್ಕೆ ಬೇಕಾದಷ್ಟು ಸ್ಥಳವೂ ಸಿಗುತ್ತಿದೆ ಎಂದು ಪ್ರಯತ್ನ ಮಾಡುತ್ತಿದ್ದೇವೆ. ಈ ದಿಕ್ಕಿನಲ್ಲಿ ನಾವು ನಾಳೆ ಮಾತುಕತೆಯಾಡುವುದಕ್ಕಿಂತ ಮುಂಚೆ ಸದನದ ಗಮನಕ್ಕೆ ತರುವುದು ನಮ್ಮ ಕರ್ತವ್ಯ Ultimate ಆಗಿ final decision ತೆಗೆದುಕೊಳ್ಳುವ ಸಮಯದಲ್ಲಿ ಮಾಡೋಣ.

4. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) ; ಸನ್ಮಾನ್ಯ ಅಧ್ಯಕ್ಷರೆ, ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರು 31ನೇ ಮಾರ್ಚಿ 2007ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಧನ ವಿನಿಯೋಗ ಲೆಕ್ಕ ಪತ್ರಗಳು ಮತ್ತು ಆರ್ಥಿಕ ಲೆಕ್ಕಪತ್ರಗಳನ್ನು ಸಭೆಯ ಮುಂದಿಡುತ್ತಿದ್ದೇನೆ.

ಭಾರತ ಸಂವಿಧಾನದ 151 (2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರು 31ನೇ ಮಾರ್ಚಿ 2007ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಲೆಕ್ಕ ಪರಿಶೋಧನಾ (ರಾಜಸ್ವ ಸ್ವೀಕೃತಿ) ವರದಿಯನ್ನು ಸಭೆಯ ಮುಂದಿಡುತ್ತಿದ್ದೇನೆ.

ಭಾರತ ಸಂವಿಧಾನದ 151 (2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರು 31ನೇ ಮಾರ್ಚಿ 2007ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಲೆಕ್ಕ ಪರಿಶೋಧನಾ (ಸಿವಿಲ್) ವರದಿಯನ್ನು ಸಭೆಯ ಮುಂದಿಡುತ್ತಿದ್ದೇನೆ.

ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕ ಪರಿಶೋಧಕರು 31ನೇ ಮಾರ್ಚಿ 2007ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಲೆಕ್ಕ ಪರಿಶೋಧನಾ (ವಾಣಿಜ್ಯ) ವರದಿಯನ್ನು ಸಭೆಯ ಮುಂದಿಡುತ್ತಿದ್ದೇನೆ.

ಅಧ್ಯಕ್ಷರು ; ಸಭೆಯ ಮುಂದಿಡಲಾಯಿತು.

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿ) ಅವರು ; ಮಾನ್ಯ ಅಧ್ಯಕ್ಷರೆ, 1997 ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ ಅಧಿನಿಯಮ 48 ಮತ್ತು 49ನೇ ಪ್ರಕರಣದ ಮೇರೆಗೆ.

1. ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರದ 2006–07ನೇ ಸಾಲಿನ ವಾರ್ಷಿಕ ವರದಿ.

1964ರ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಅಧಿನಿಯಮ ಅನುಚ್ಛೇದ 17(3)ರ ಪ್ರಕರಣದ ಮೇರೆಗೆ :

1. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ 2007–08ನೇ ಸಾಲಿನ ವಾರ್ಷಿಕ ಪರಿಷ್ಕೃತ ಆಯವ್ಯಯ ಪಟ್ಟಿ ಮತ್ತು 2008–09ನೇ ಸಾಲಿನ ಆಯವ್ಯಯ ಪಟ್ಟಿ.

2. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ 2006–07ನೇ ಸಾಲಿನ ವಾರ್ಷಿಕ ಲೆಕ್ಕ ಮತ್ತು ಲೆಕ್ಕಪರೀಕ್ಷಕರ ವರದಿ

1976ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮದ ಕಲಂ 47ರ ಮೇರೆಗೆ :